# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಶ್ರೀ ಶೆಟ್ಟಿ ಸಂಗಪ್ಪ ಮೆಮೋರಿಯಲ್ ಟ್ರಸ್ಟ್, ಕಲಬುರಗಿ ಇವರು ಹೊಸದಾಗಿ ಡಿ.ಫಾರ್ಮಸಿ ಕೋರ್ಸ್ ಪ್ರಾರಂಭಿಸಲು ಅನುಮತಿ ನೀಡುವ ಬಗ್ಗೆ.

ಓದಲಾಗಿದೆ: ಔಷಧ ನಿಯಂತ್ರಕರು, ಔಷಧ ನಿಯಂತ್ರಣ ಇಲಾಖೆ, ಬೆಂಗಳೂರು ಇವರ ಪ್ರಸ್ತಾವನೆ ಸಂಖ್ಯೆ:ಔನಿಇ/136/ಯೋಜನೆ/2014-15, ದಿನಾಂಕ:24.11.2016 ಮತ್ತು 07.01.2017.

***

**ಪ್ರಸ್ತಾವನೆ:**

ಮೇಲೆ ಓದಲಾದ ಪ್ರಸ್ತಾವನೆಗಳಲ್ಲಿ, ಔಷಧ ನಿಯಂತ್ರಕರು, ಔಷಧ ನಿಯಂತ್ರಣ ಇಲಾಖೆ, ಬೆಂಗಳೂರು ಇವರು ಶ್ರೀ ಶೆಟ್ಟಿ ಸಂಗಪ್ಪ ಮೆಮೋರಿಯಲ್ ಟ್ರಸ್ಟ್‌ನ ಶೆಟ್ಟಿ ಇನ್‌ಸ್ಟಿಟ್ಯೂಟ್ ಆಫ್ ಫಾರ್ಮಸ್ಯುಟಿಕಲ್ ಸೈನ್ಸಸ್, ಸರ್ವೆ ನಂ. 179/1&5, 5ನೇ ಕೆ.ಎಂ., ಕಲಬುರಗಿ-ಶಹಾಬಾದ್ ರಸ್ತೆ, ಕಲಬುರಗಿ ಇಲ್ಲಿ 2017-18ನೇ ಶೈಕ್ಷಣಕ ಸಾಲಿನಿಂದ ಡಿ.ಫಾರ್ಮ ಕೋರ್ಸ್ ಪ್ರಾರಂಭಿಸಲು ಅನುಮತಿ ನೀಡುವುದಕ್ಕೆ ಸಂಬಂಧಿಸಿದಂತೆ, ಸದಸ್ಯ ಕಾರ್ಯದರ್ಶಿ, ಪರೀಕ್ಷಾ ಪ್ರಾಧಿಕಾರ ಮಂಡಳಿ, ಬೆಂಗಳೂರು ಇವರು ಸಲ್ಲಿಸಿರುವ ಪರಿವೀಕ್ಷಣಾ ವರದಿಯನುಸಾರ ಸದರಿ ಟ್ರಸ್ಟ್ ಅಡಿಯಲ್ಲಿ ನಡೆಸುತ್ತಿರುವ ಇಂಜಿನಿಯರಿಂಗ್ ವಿದ್ಯಾಸಂಸ್ಥೆಯ ಕಟ್ಟಡದ ಒಂದು ಮಹಡಿಯನ್ನು ಡಿ.ಫಾರ್ಮ ಕಾಲೇಜನ್ನು ಪ್ರಾರಂಭಿಸಲು ಮೀಸಲಿಟ್ಟಿರುತ್ತದೆ ಮತ್ತು ಸದರಿ ಟ್ರಸ್ಟ್ ಅಡಿಯಲ್ಲಿ ಒಟ್ಟು 13 ಎಕರೆ ಜಾಗ ಹೊಂದಿದ್ದು, ಇದರಲ್ಲಿ 2 ಎಕರೆ ಜಾಗದಲ್ಲಿ ಮುಂದಿನ ದಿನಗಳಲ್ಲಿ ಸ್ವಂತ ಕಟ್ಟಡವನ್ನು ನಿರ್ಮಿಸುವ ಯೋಜನೆಯನ್ನು ಹೊಂದಿದ್ದು, 60 ವಿದ್ಯಾರ್ಥಿಗಳ ಪ್ರಥಮ ಡಿ.ಫಾರ್ಮ ತರಗತಿಗಳನ್ನು ಪ್ರಾರಂಭಿಸಲು ನಿಯಮಾನುಸಾರ ಅಗತ್ಯವಿರುವ ಮೂಲ ಸೌಲಭ್ಯಗಳನ್ನು ಹೊಂದಿದ್ದು, ಇನ್ನಿತರ ಅಗತ್ಯತೆಗಳನ್ನು ಒಳಗೊಂಡಿರುವುದರಿಂದ, ಸೂಕ್ತ ಷರತ್ತುಗಳನ್ನು ವಿಧಿಸಿ, 2017-18ನೇ ಶೈಕ್ಷಣಿಕ ಸಾಲಿನಿಂದ ಡಿ.ಫಾರ್ಮ ಕೋರ್ಸ್‌ನ್ನು ಪ್ರಾರಂಭಿಸಲು ಅನುಮತಿ ನೀಡಬಹುದಾಗಿದೆಯೆಂದು ಸರ್ಕಾರಕ್ಕೆ ವರದಿ ಸಲ್ಲಿಸಿರುತ್ತಾರೆ.

ಔಷಧ ನಿಯಂತ್ರಕರ ಪ್ರಸ್ತಾವನೆ ಮತ್ತು ಲಭ್ಯವಿರುವ ದಾಖಲೆಗಳನ್ನು ಕೂಲಂಕಷವಾಗಿ ಪರಿಶೀಲಿಸಿದ ಸರ್ಕಾರವು, ಶ್ರೀ ಶೆಟ್ಟಿ ಸಂಗಪ್ಪ ಮೆಮೋರಿಯಲ್ ಟ್ರಸ್ಟ್, ಕಲಬುರಗಿ ಇವರು ಶೆಟ್ಟಿ ಇನ್‌ಸ್ಟಿಟ್ಯೂಟ್ ಆಫ್ ಫಾರ್ಮಸ್ಯುಟಿಕಲ್ ಸೈನ್ಸಸ್ ಹೆಸರಿನಲ್ಲಿ 2017-18ನೇ ಶೈಕ್ಷಣಿಕ ಸಾಲಿನಿಂದ 60 ವಿದ್ಯಾರ್ಥಿಗಳ ಪ್ರವೇಶಮಿತಿಯೊಂದಿಗೆ ಹೊಸದಾಗಿ ಡಿ.ಫಾರ್ಮಸಿ ಕೋರ್ಸ್ ಪ್ರಾರಂಭಿಸಲು ಫಾರ್ಮಸಿ ಕೌನ್ಸಿಲ್ ಆಫ್ ಇಂಡಿಯಾ, ನವದೆಹಲಿ ಹಾಗೂ ಅಗತ್ಯವಿರುವ ಇತರೆ ಸಕ್ಷಮ ಪ್ರಾಧಿಕಾರಗಳಿಂದ ಅನುಮೋದನೆಯನ್ನು ಪಡೆಯುವ ಷರತ್ತಿಗೊಳಪಟ್ಟು ಅನುಮತಿ ನೀಡಲು ನಿರ್ಧರಿಸಿದೆ. ಆದುದರಿಂದ ಈ ಕೆಳಕಂಡ ಆದೇಶ.

**ಸರ್ಕಾರದ ಆದೇಶ ಸಂಖ್ಯೆ:ಆಕುಕ 320 ಪಿಟಿಡಿ 2014, ಬೆಂಗಳೂರು, ದಿನಾಂಕ:24.01.2017.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಶ್ರೀ ಶೆಟ್ಟಿ ಸಂಗಪ್ಪ ಮೆಮೋರಿಯಲ್ ಟ್ರಸ್ಟ್, ಕಲಬುರಗಿ ಇವರು ಸರ್ವೆ ನಂ. 179/1&5, 5ನೇ ಕೆ.ಎಂ., ಕಲಬುರಗಿ-ಶಹಾಬಾದ್ ರಸ್ತೆ, ಕಲಬುರಗಿ ಇಲ್ಲಿ 2017-18ನೇ ಶೈಕ್ಷಣಿಕ ಸಾಲಿನಿಂದ ಶೆಟ್ಟಿ ಇನ್‌ಸ್ಟಿಟ್ಯೂಟ್ ಆಫ್ ಫಾರ್ಮಸ್ಯುಟಿಕಲ್ ಸೈನ್ಸಸ್ ಹೆಸರಿನಲ್ಲಿ 60 ವಿದ್ಯಾರ್ಥಿಗಳ ಪ್ರವೇಶಮಿತಿಯೊಂದಿಗೆ ಹೊಸದಾಗಿ ಪ್ರಥಮ ಡಿ.ಫಾರ್ಮಸಿ ಕೋರ್ಸ್ ಪ್ರಾರಂಭಿಸಲು ಈ ಕೆಳಕಂಡ ಷರತ್ತುಗಳಿಗೊಳಪಟ್ಟು ಸರ್ಕಾರದ ಅನುಮತಿ ನೀಡಲಾಗಿದೆ.

1. ಪ್ರಸ್ತಾಪಿಸಿರುವ ಡಿ.ಫಾರ್ಮಸಿ ಕಾಲೇಜು/ಕೋರ್ಸ್‌ನ್ನು ಹೊಸದಾಗಿ ಪ್ರಾರಂಭಿಸಲು ಫಾರ್ಮಸಿ ಕೌನ್ಸಿಲ್ ಆಫ್ ಇಂಡಿಯಾ, ನವದೆಹಲಿ ಇವರಿಂದ ಅನುಮೋದನೆಯನ್ನು ಪಡೆಯತಕ್ಕದ್ದು.
2. ಕಾಲೇಜನ್ನು ಪ್ರಾರಂಭಿಸುವ ಮುನ್ನ ಅಗತ್ಯವಿರುವ ಮೂಲ ಸೌಲಭ್ಯಗಳು ಹಾಗೂ ಸಿಬ್ಬಂದಿಯನ್ನು ಹೊಂದಿರತಕ್ಕದ್ದು.

..2

3. ಸರ್ಕಾರದ ಸೀಟುಗಳ ಹಂಚಿಕೆಯಲ್ಲಿ ಪ್ರವೇಶಾವಕಾಶಕ್ಕೆ ಹಾಲಿ ಜಾರಿಯಲ್ಲಿರುವ ನಿಯಮಗಳಿಗೆ ಸಂಸ್ಥೆಯು ಬದ್ಧವಾಗಿರಬೇಕು.
4. ಅಖಿಲ ಭಾರತ ತಾಂತ್ರಿಕ ಶಿಕ್ಷಣ ಪರಿಷತ್ತು/ಫಾರ್ಮಸಿ ಕೌನ್ಸಿಲ್ ಆಫ್ ಇಂಡಿಯಾ ನಿಗದಿಪಡಿಸಿರುವ ಪರಿನಿಯಮಾವಳಿಗಳನ್ನು ಕಡ್ಡಾಯವಾಗಿ ಪಾಲಿಸತಕ್ಕದ್ದು.
5. ರಾಜ್ಯ ಸರ್ಕಾರವು ಕಾಲಕಾಲಕ್ಕೆ ನೀಡುವ ಸೂಚನೆ ಹಾಗೂ ಆದೇಶಗಳನ್ನು ಪಾಲಿಸತಕ್ಕದ್ದು.
6. ಈ ಕಾಲೇಜಿಗೆ ಕರ್ನಾಟಕ ಸರ್ಕಾರದ ವತಿಯಿಂದ ಯಾವುದೇ ರೀತಿಯ ಅನುದಾನ, ಆರ್ಥಿಕ ಸೌಲಭ್ಯಗಳನ್ನು ನೀಡಲಾಗುವುದಿಲ್ಲ. ಇದು ಶಾಶ್ವತ ಅನುದಾನ ರಹಿತ ಷರತ್ತಿಗೆ ಒಳಪಟ್ಟಿರುತ್ತದೆ.
7. ಸರ್ಕಾರ/ಪ್ರಾಧಿಕಾರದ ಪೂರ್ವಾನುಮತಿಯಿಲ್ಲದೆ ಯಾವುದೇ ಕಾರಣಕ್ಕೂ ಕಾಲೇಜಿನ ಹೆಸರು ಮತ್ತು ವಿಳಾಸವನ್ನು ಬದಲಾಯಿಸುವಂತಿಲ್ಲ.
8. ಸರ್ಕಾರ ವಿಧಿಸಿರುವ ಮೇಲ್ಕಂಡ ಯಾವುದೇ ಒಂದು ಷರತ್ತನ್ನು ಉಲ್ಲಂಘಿಸಿದ್ದಲ್ಲಿ ಸಂಯೋಜನೆ/ಮಂಜೂರಾತಿಯನ್ನು ಹಿಂತೆಗೆದುಕೊಳ್ಳಲಾಗುವುದು.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಬಿ.ಕಮಲಮ್ಮ)
ಸರ್ಕಾರದ ಅಧೀನ ಕಾರ್ಯದರ್ಶಿ,
ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ
(ಭಾರತೀಯ ವೈದ್ಯ ಪದ್ಧತಿ)
(ದೂರವಾಣಿ ಸಂಖ್ಯೆ:22034292)

ಬಿ. ಕಮಲಮ್ಮ
ಸರ್ಕಾರದ ಅಧೀನ ಕಾರ್ಯದರ್ಶಿ
ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ
(ಆಯುಷ್, ಔಷಧ ನಿಯಂತ್ರಣ ಮತ್ತು ಸಜ್ಜು)

**ಇವರಿಗೆ:**

1) ಔಷಧ ನಿಯಂತ್ರಕರು, ಔಷಧ ನಿಯಂತ್ರಣ ಇಲಾಖೆ, ಅರಮನೆ ರಸ್ತೆ, ಬೆಂಗಳೂರು.
2) ಅಧ್ಯಕ್ಷರು, ಪರೀಕ್ಷಾ ಪ್ರಾಧಿಕಾರ ಮಂಡಳಿ, ಸರ್ಕಾರಿ ಔಷಧ ವಿಜ್ಞಾನ ಮಹಾವಿದ್ಯಾಲಯ, ಪಿ.ಕಾಳಿಂಗರಾವ್ ರಸ್ತೆ, ಬೆಂಗಳೂರು–560 027.
3) ಕುಲಸಚಿವರು, ರಾಜೀವ್‌ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯ, 4ನೇ ಟಿ.ಬ್ಲಾಕ್, ಜಯನಗರ, ಬೆಂಗಳೂರು.
4) ಅಧ್ಯಕ್ಷರು, ಶ್ರೀ ಶೆಟ್ಟಿ ಸಂಗಪ್ಪ ಮೆಮೋರಿಯಲ್ ಟ್ರಸ್ಟ್, 5ನೇ ಕೆ.ಎಂ., ಕಲಬುರಗಿ–ಶಹಾಬಾದ್ ರಸ್ತೆ, ಕಲಬುರಗಿ–585 105.

**ಪ್ರತಿಗಳು:–**

1. ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಕಾಸ ಸೌಧ, ಬೆಂಗಳೂರು–1.
2. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಇವರ ಆಪ್ತ ಕಾರ್ಯದರ್ಶಿಯವರಿಗೆ.
3. ಸರ್ಕಾರದ ಉಪ ಕಾರ್ಯದರ್ಶಿ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಇವರ ಆಪ್ತ ಸಹಾಯಕರಿಗೆ.
4. ಶಾಖೆಯ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.

## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಶ್ರೀ ಶೆಟ್ಟಿ ಸಂಗಪ್ಪ ಮೆಮೋರಿಯಲ್ ಟ್ರಸ್ಟ್, ಕಲಬುರಗಿ ಇವರು ಶೆಟ್ಟಿ ಇನ್ಸ್ಟಿಟ್ಯೂಟ್ ಆಫ್ ಫಾರ್ಮಸೂಟಿಕಲ್ ಸೈನ್ಸಸ್ ಎಂಬ ಹೆಸರಿನಲ್ಲಿ ಹೊಸದಾಗಿ ಬಿ-ಫಾರ್ಮಸಿ ಕೋರ್ಸ್ ಪ್ರಾರಂಭಿಸಲು ಅನುಮತಿ ನೀಡುವ ಬಗ್ಗೆ.

**ಓದಲಾಗಿದೆ:**
1. ಅಧ್ಯಕ್ಷರು, ಶ್ರೀ ಶೆಟ್ಟಿ ಸಂಗಪ್ಪ ಮೆಮೋರಿಯಲ್ ಟ್ರಸ್ಟ್, ಕಲಬುರಗಿ ಇವರ ಮನವಿ ಪತ್ರ ದಿನಾಂಕ: 26.07.2021.
2. ಔಷಧ ನಿಯಂತ್ರಕರು, ಔಷಧ ನಿಯಂತ್ರಣ ಇಲಾಖೆ, ಬೆಂಗಳೂರು ಇವರ ವರದಿ ಸಂಖ್ಯೆ:ಔನಿಇ/19/ಯೋಜನೆ/2021-22, ದಿನಾಂಕ:12.11.2021.
3. ನಿಬಂಧಕರು, ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನಗಳ ಮಹಾವಿದ್ಯಾಲಯ ಇವರ ವರದಿ ಸಂಖ್ಯೆ: ACA/AFF/F/PH-180/2022-2023, ದಿನಾಂಕ:07.09.2022

****

**ಪ್ರಸ್ತಾವನೆ**

ಮೇಲೆ ಓದಲಾದ ಕ್ರ.ಸಂ (1)ರ ಮನವಿ ಪತ್ರದಲ್ಲಿ, ಅಧ್ಯಕ್ಷರು, ಶ್ರೀ ಶೆಟ್ಟಿ ಸಂಗಪ್ಪ ಮೆಮೋರಿಯಲ್ ಟ್ರಸ್ಟ್, ಕಲಬುರಗಿ ಇವರು ಸಂಸ್ಥೆಯ ವತಿಯಿಂದ ಈಗಾಗಲೇ 4 ವರ್ಷದಿಂದ ಡಿ-ಫಾರ್ಮಸಿ ಕೋರ್ಸ್‌ನ್ನು ನಡೆಸುತ್ತಿದ್ದು, ಸಂಸ್ಥೆಯಲ್ಲಿ ಬಿ ಫಾರ್ಮಸಿ ಕೋರ್ಸ್ ಪ್ರಾರಂಭಿಸಲು ಬೇಕಾಗಿರುವ ಮೂಲಭೂತ ಸೌಲಭ್ಯಗಳು ನಿಯಮಾನುಸಾರ ಲಭ್ಯವಿದ್ದು, ಬಿ-ಫಾರ್ಮಸಿ ಕೋರ್ಸನ್ನು ಪ್ರಾರಂಭಿಸಲು ಅನುಮತಿ ನೀಡುವಂತೆ ಕೋರಿರುತ್ತಾರೆ.

ಮೇಲೆ ಓದಲಾದ ಕ್ರ.ಸಂ.(2)ರ ಔಷಧ ನಿಯಂತ್ರಕರು, ವರದಿಯಲ್ಲಿ ಪ್ರಾಂಶುಪಾಲರು, ಸರ್ಕಾರಿ ಔಷಧ ವಿಜ್ಞಾನ ಮಹಾವಿದ್ಯಾಲಯ, ಬೆಂಗಳೂರು ಇವರು ಸಲ್ಲಿಸಿರುವ ಪರಿವೀಕ್ಷಣಾ ವರದಿಯಲ್ಲಿ ಸದರಿ ಸಂಸ್ಥೆಯು 2021-22ನೇ ಶೈಕ್ಷಣಿಕ ಸಾಲಿನಿಂದ ಹೊಸದಾಗಿ ಬಿ ಫಾರ್ಮಸಿ ಕೋರ್ಸನ್ನು ಪ್ರಾರಂಭಿಸಲು ನಿಯಮಾನುಸಾರ ಅಗತ್ಯ ಸೌಲಭ್ಯಗಳನ್ನು ಹೊಂದಿದ್ದು, RGUHS ಮತ್ತು PCI ನಿಂದ ಅನುಮತಿ ಪಡೆಯುವ ಷರತ್ತಿಗೊಳಪಟ್ಟು ಬಿ.ಫಾರ್ಮ ಕೋರ್ಸನ್ನು ಪ್ರಾರಂಭಿಸಲು ಅನುಮತಿ ನೀಡಬಹುದಾಗಿದೆ ಎಂದು ಅಭಿಪ್ರಾಯ ನೀಡಿರುವುದಾಗಿ ತಿಳಿಸಿರುತ್ತಾರೆ.

ಮೇಲೆ ಓದಲಾದ ಕ್ರ.ಸಂ.(3)ರ ವರದಿಯಲ್ಲಿ ಶ್ರೀ ಶೆಟ್ಟಿ ಸಂಗಪ್ಪ ಮೆಮೋರಿಯಲ್ ಟ್ರಸ್ಟ್, ಕಲಬುರಗಿ ಇವರು ಶೆಟ್ಟಿ ಇನ್ಸ್ಟಿಟ್ಯೂಟ್ ಆಫ್ ಫಾರ್ಮಸೂಟಿಕಲ್ ಸೈನ್ಸಸ್ ಎಂಬ ಹೆಸರಿನಲ್ಲಿ ಹೊಸದಾಗಿ 2022-23ನೇ ಸಾಲಿಗೆ ಬಿ-ಫಾರ್ಮಸಿ ಕೋರ್ಸ್ ಪ್ರಾರಂಭಿಸಲು ಅನುಮತಿ ನೀಡುವ ಸಂಬಂಧ ಸ್ಥಳೀಯ ತಪಾಸಣಾ ಸಮಿತಿಯು ಸದರಿ ಫಾರ್ಮಸಿ ಕಾಲೇಜಿನ ತಪಾಸಣೆ ಮಾಡಿ ವರದಿ ಸಲ್ಲಿಸಿದ್ದು, ಅದರಂತೆ ಸಿಂಡಿಕೇಟ್ ಸಭೆಯಲ್ಲಿ ಚರ್ಚಿಸಿದಂತೆ ಶ್ರೀ ಶೆಟ್ಟಿ ಸಂಗಪ್ಪ ಶ್ರೀ ಶೆಟ್ಟಿ ಸಂಗಪ್ಪ ಮೆಮೋರಿಯಲ್ ಟ್ರಸ್ಟ್, ಕಲಬುರಗಿ ಇವರು ಶೆಟ್ಟಿ ಇನ್ಸ್ಟಿಟ್ಯೂಟ್ ಆಫ್ ಫಾರ್ಮಸೂಟಿಕಲ್ ಸೈನ್ಸಸ್ ಎಂಬ ಹೆಸರಿನಲ್ಲಿ ಹೊಸದಾಗಿ 2022-23ನೇ ಸಾಲಿಗೆ 60 ಸೀಟುಗಳ ಪ್ರವೇಶ ಮಿತಿಯಲ್ಲಿ ಬಿ-ಫಾರ್ಮಸಿ ಕೋರ್ಸ್ ಪ್ರಾರಂಭಿಸಲು ಶಿಫಾರಸ್ಸು ಮಾಡಿರುತ್ತಾರೆ.

ಔಷಧ ನಿಯಂತ್ರಕರ ಹಾಗೂ ಕುಲಪತಿಗಳ ವರದಿಗಳು ಮತ್ತು ಲಭ್ಯವಿರುವ ದಾಖಲೆಗಳನ್ನು ಕೂಲಂಕಷವಾಗಿ ಪರಿಶೀಲಿಸಿದ ಸರ್ಕಾರವು, ಶ್ರೀ ಶೆಟ್ಟಿ ಸಂಗಪ್ಪ ಮೆಮೋರಿಯಲ್ ಟ್ರಸ್ಟ್, ಕಲಬುರಗಿ ಇವರು ಶೆಟ್ಟಿ ಇನ್ಸ್ಟಿಟ್ಯೂಟ್ ಆಫ್ ಫಾರ್ಮಸೂಟಿಕಲ್ ಸೈನ್ಸಸ್ ಎಂಬ ಹೆಸರಿನಲ್ಲಿ ಹೊಸದಾಗಿ 2022-23ನೇ ಸಾಲಿನಿಂದ 60 ಸೀಟುಗಳ ಪ್ರವೇಶ ಮಿತಿಯಲ್ಲಿ ಬಿ-ಫಾರ್ಮಸಿ ಕೋರ್ಸ್ ಪ್ರಾರಂಭಿಸಲು ನಿರಾಕ್ಷೇಪಣಾ ಪತ್ರ ನೀಡಲು ಸರ್ಕಾರವು ನಿರ್ಧರಿಸಿದೆ. ಆದುದರಿಂದ ಈ ಕೆಳಕಂಡ ಆದೇಶ.

**ಸರ್ಕಾರದ ಆದೇಶ ಸಂಖ್ಯೆ:ಆಕುಕ 60 ಪಿಟಿಡಿ 2021**
**ಬೆಂಗಳೂರು, ದಿನಾಂಕ: 30.11.2022**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಶ್ರೀ ಶೆಟ್ಟಿ ಸಂಗಪ್ಪ ಮೆಮೋರಿಯಲ್ ಟ್ರಸ್ಟ್, ಶಹಬಾದ್ ರಸ್ತೆ, ಕಲಬುರಗಿ-585105 ಇವರಿಗೆ ಶೆಟ್ಟಿ ಇನ್ಸ್ಟಿಟ್ಯೂಟ್ ಆಫ್ ಫಾರ್ಮಸೂಟಿಕಲ್ ಸೈನ್ಸಸ್ ಎಂಬ ಹೆಸರಿನಲ್ಲಿ 2022-23ನೇ ಶೈಕ್ಷಣಿಕ ಸಾಲಿಗೆ ಹೊಸದಾಗಿ ಬಿ-ಫಾರ್ಮಸಿ ಕೋರ್ಸ್‌ನ್ನು 60 ಸೀಟುಗಳ ಪ್ರವೇಶ ಮಿತಿಯಲ್ಲಿ ಪ್ರಾರಂಭಿಸಲು ಈ ಕೆಳಕಂಡ ಷರತ್ತುಗಳಿಗೊಳಪಟ್ಟು ಸರ್ಕಾರದ ನಿರಾಕ್ಷೇಪಣಾ ಪತ್ರ ನೀಡಲಾಗಿದೆ.

1. ಪ್ರಸ್ತಾಪಿಸಿರುವ ಶ್ರೀ ಶೆಟ್ಟಿ ಸಂಗಪ್ಪ ಮೆಮೋರಿಯಲ್ ಟ್ರಸ್ಟ್, ಕಲಬುರಗಿ ಇವರ ಶೆಟ್ಟಿ ಇನ್ಸ್ಟಿಟ್ಯೂಟ್ ಆಫ್ ಫಾರ್ಮಸೂಟಿಕಲ್ ಸೈನ್ಸಸ್ ಇವರು 2022-23ನೇ ಶೈಕ್ಷಣಿಕ ಸಾಲಿಗೆ ಬಿ-ಫಾರ್ಮ ಕೋರ್ಸ್ ಹೊಸದಾಗಿ ಪ್ರಾರಂಭಿಸಲು ಫಾರ್ಮಸಿ ಕೌನ್ಸಿಲ್ ಆಫ್ ಇಂಡಿಯಾ, ನವದೆಹಲಿ ಮತ್ತು RGUHS ಇವರಿಂದ ಅನುಮೋದನೆಯನ್ನು ಪಡೆಯತಕ್ಕದ್ದು.

2. ಕಾಲೇಜನ್ನು ಪ್ರಾರಂಭಿಸುವ ಮುನ್ನ ಅಗತ್ಯವಿರುವ ಮೂಲ ಸೌಲಭ್ಯಗಳು ಹಾಗೂ ಸಿಬ್ಬಂದಿಗಳನ್ನು ಹೊಂದಿರತಕ್ಕದ್ದು.

3. ಸರ್ಕಾರದ ಸೀಟುಗಳ ಹಂಚಿಕೆಯಲ್ಲಿ ಪ್ರವೇಶಾವಕಾಶಕ್ಕೆ ಹಾಲಿ ಜಾರಿಯಲ್ಲಿರುವ ನಿಯಮಗಳಿಗೆ ಸಂಸ್ಥೆಯು ಬದ್ಧವಾಗಿರಬೇಕು.

4. ಫಾರ್ಮಸಿ ಕೌನ್ಸಿಲ್ ಆಫ್ ಇಂಡಿಯಾ ನಿಗದಿಪಡಿಸಿರುವ ಪರಿನಿಯಮಾವಳಿಗಳನ್ನು ಕಡ್ಡಾಯವಾಗಿ ಪಾಲಿಸತಕ್ಕದ್ದು.

5. ರಾಜ್ಯ/ಕೇಂದ್ರ ಸರ್ಕಾರವು ಕಾಲಕಾಲಕ್ಕೆ ನೀಡುವ ಸೂಚನೆ ಹಾಗೂ ಆದೇಶಗಳನ್ನು ಪಾಲಿಸತಕ್ಕದ್ದು.

6. ಈ ಕಾಲೇಜಿಗೆ ಕರ್ನಾಟಕ ಸರ್ಕಾರದ ವತಿಯಿಂದ ಯಾವುದೇ ರೀತಿಯ ಅನುದಾನ, ಆರ್ಥಿಕ ಸೌಲಭ್ಯಗಳನ್ನು ನೀಡಲಾಗುವುದಿಲ್ಲ. ಇದು ಶಾಶ್ವತ ಅನುದಾನ ರಹಿತ ಷರತ್ತಿಗೆ ಒಳಪಟ್ಟಿರುತ್ತದೆ.

7. ಸರ್ಕಾರ/ಪ್ರಾಧಿಕಾರದ ಪೂರ್ವಾನುಮತಿಯಿಲ್ಲದೆ ಯಾವುದೇ ಕಾರಣಕ್ಕೂ ಕಾಲೇಜಿನ ಹೆಸರು ಮತ್ತು ವಿಳಾಸವನ್ನು ಬದಲಾಯಿಸುವಂತಿಲ್ಲ.

8. ಸರ್ಕಾರವು ಕಾಲಕಾಲಕ್ಕೆ ನಿಗದಿಪಡಿಸುವ ಕೋರ್ಸ್ ಶುಲ್ಕಗಳನ್ನು ಮಾತ್ರ ವಿದ್ಯಾರ್ಥಿಗಳಿಂದ ಪಡೆಯತಕ್ಕದ್ದು ಮತ್ತು ಸಕ್ಷಮ ಪ್ರಾಧಿಕಾರದಿಂದ ಮಂಜೂರಾದ ಸೀಟುಗಳಲ್ಲಿ ಕಾಲಕಾಲಕ್ಕೆ ಸರ್ಕಾರವು ನಿಗದಿಪಡಿಸುವ ಅನುಪಾತದಲ್ಲಿ ಸರ್ಕಾರಕ್ಕೆ ಸೀಟುಗಳನ್ನು ಬಿಟ್ಟುಕೊಡತಕ್ಕದ್ದು.

JRG

9. ಉನ್ನತ ಮಟ್ಟದ ಸಮಿತಿ ಸಭೆಯ ನಿರ್ಣಯದಂತೆ ಬಿ-ಫಾರ್ಮ ಕೋರ್ಸ್ ಪ್ರಾರಂಭಿಸಲು ಅಗತ್ಯವಿರುವ ಮೊತ್ತವನ್ನು ಸಂಸ್ಥೆಯು ಬ್ಯಾಂಕ್ ಖಾತೆಯಲ್ಲಿ ಹೊಂದಿರುವ ಬಗ್ಗೆ ಔಷಧ ನಿಯಂತ್ರಕರು, ಔಷಧ ನಿಯಂತ್ರಣ ಇಲಾಖೆ ಇವರು ಖಾತ್ರಿ ಪಡಿಸಿಕೊಳ್ಳತಕ್ಕದ್ದು.

10. ಸರ್ಕಾರ ವಿಧಿಸಿರುವ ಮೇಲ್ಕಂಡ ಯಾವುದೇ ಒಂದು ಷರತ್ತನ್ನು ಉಲ್ಲಂಘಿಸಿದ್ದಲ್ಲಿ ಸಂಯೋಜನೆ/ ಮಂಜೂರಾತಿಯನ್ನು ಹಿಂತೆಗೆದುಕೊಳ್ಳಲಾಗುವುದು.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

SR Gorawar
30/11/2022

**(ಶೈಲಾ ಆರ್. ಗೊರವರ)**
ಸರ್ಕಾರದ ಅಧೀನ ಕಾರ್ಯದರ್ಶಿ
ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ
(ಭಾವೈಪ ಮತ್ತು ಸಮನ್ವಯ)

**ಇವರಿಗೆ:**

1. ಔಷಧ ನಿಯಂತ್ರಕರು, ಔಷಧ ನಿಯಂತ್ರಣ ಇಲಾಖೆ, ಅರಮನೆ ರಸ್ತೆ, ಬೆಂಗಳೂರು.
2. ಕುಲಪತಿಗಳು, ರಾಜೀವ್‌ಗಾಂಧಿ ಆರೋಗ್ಯ ವಿಜ್ಞಾನಗಳ ಮಹಾವಿದ್ಯಾಲಯ, 4ನೇ 'ಟಿ' ಬ್ಲಾಕ್, ಜಯನಗರ, ಬೆಂಗಳೂರು-41.
3. ಪ್ರಾಂಶುಪಾಲರು, ಸರ್ಕಾರಿ ಔಷಧ ವಿಜ್ಞಾನ ಮಹಾವಿದ್ಯಾಲಯ, ನಂ.2, ಪಿ.ಕಾಳಿಂಗರಾವ್ ರಸ್ತೆ, ಸುಬ್ಬಯ್ಯ ವೃತ್ತ, ಬೆಂಗಳೂರು-560 027.
4. ಅಧ್ಯಕ್ಷರು, ಶ್ರೀ ಶೆಟ್ಟಿ ಸಂಗಪ್ಪ ಮೆಮೋರಿಯಲ್ ಟ್ರಸ್ಟ್, ಕಲಬುರಗಿ, ಶಹಬಾದ್ ರೋಡ್, ಕಲಬುರಗಿ-585105.
5. ಶಾಖೆಯ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.

**ಪ್ರತಿಗಳು:-**

1. ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು-1.
2. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಇವರ ಪತ್ರಾಂಕಿತ ಆಪ್ತ ಸಹಾಯಕರು.
3. ಸರ್ಕಾರದ ಜಂಟಿ ಕಾರ್ಯದರ್ಶಿ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಇವರ ಆಪ್ತ ಸಹಾಯಕರು.